# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1027
ಮಾನ್ಯ ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16-12-2025
ಉತ್ತರಿಸುವ ಸಚಿವರು : ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದ ಶ್ರೀರಾಮ ಮಾರ್ಕೆಟ್, ಬಸ್ ಸ್ಟ್ಯಾಂಡ್ ಹಾಗೂ ಸುತ್ತಮುತ್ತ ಮತ್ತು ನಗರದ ಇತರ ಕಡೆ ಯಾವುದೇ ಸ್ವಚ್ಛತಾ ಕಾರ್ಯ ಇಲ್ಲದೆ ಅಲ್ಲಿಯ ಜನರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣವಾದ ವಿವರವನ್ನು ಒದಗಿಸುವುದು) | ಬಂದಿದೆ.<br><br>• ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದ ಶ್ರೀ ರಾಮ ಮಾರ್ಕೆಟ್, ಬಸ್ ಸ್ಯಾಂಡ್ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರತಿದಿನ ಪುರಸಭೆ ವತಿಯಿಂದ ಕಸ ಸಂಗ್ರಹಣೆಗಾಗಿ ವಾಹನಗಳು ಮತ್ತು ಪೌರಕಾಮಿಕರನ್ನು ನಿಯೋಜಿಸಿ ಸ್ವಚ್ಚತಾ ಕಾರ್ಯವನ್ನು ಕೈಗೂಳ್ಳಲಾಗುತ್ತಿದೆ.<br>• ಹಳೆ ಬಸ್ ನಿಲ್ದಾಣವು ತಗ್ಗು ಪ್ರದೇಶದಲ್ಲಿ ನಿರ್ಮಾಣವಾಗಿರುವುದರಿಂದ ನೀರು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿರುತ್ತದೆ. ಕಳೆದ ಸೆಪ್ಟೆಂಬರ್-2025 ತಿಂಗಳಿನಿಂದ ಹೊಸ ಬಸ್ ನಿಲ್ದಾಣ ನಿರ್ಮಾಣದ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಪ್ರಸ್ತುತ ಹಳೆ ಬಸ್ ನಿಲ್ದಾಣದ ಕಟ್ಟಡ ನಿರ್ಮಾಣ ಮತ್ತು ಕೆಡವುವಿಕೆ ತ್ಯಾಜ್ಯವನ್ನು (C&D Waste) ತಗ್ಗು ಪ್ರದೇಶದಲ್ಲಿ ಭರ್ತಿ ಮಾಡಲಾಗಿದೆ. ಉಳಿದ ತಗ್ಗು ಪ್ರದೇಶವು ಕೃಷಿ ಉತ್ಪನ್ನ ಮಾರುಕಟ್ಟೆಯ ಜಾಗವಾಗಿರುತ್ತದೆ.<br>• ನಗರದ ಇತರೆ ಕಡೆಗಳಲ್ಲಿ ದೈನಂದಿನ ಕಸದ ನಿರ್ವಹಣೆಗಾಗಿ ಪುರಸಭೆ ವತಿಯಿಂದ ಕಸ ಸಂಗ್ರಹಣೆ ವಾಹನಗಳು ಮತ್ತು ಪೌರಕಾರ್ಮಿಕರನ್ನು ನಿಯೋಜಿಸಿ, ತ್ಯಾಜ್ಯ ಸಂಗ್ರಹಣೆಗೆ ಕ್ರಮ ವಹಿಸಲಾಗಿದೆ.<br>• ಪ್ರತಿನಿತ್ಯ ಕಸದ ನಿರ್ವಹಣೆ ಕುರಿತು ಸಾರ್ವಜನಿಕರಿಂದ ಸ್ವೀಕೃತವಾಗುವ ದೂರುಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡಲು ಕ್ರಮ ವಹಿಸಲಾಗುತ್ತಿದೆ. |
| ಆ) | ಸದರಿ ಪಟ್ಟಣದಲ್ಲಿ ಮಳೆಗಾಲದ ಸಂದರ್ಭದಲ್ಲಿ ತಗ್ಗು ಪ್ರದೇಶದಲ್ಲಿ ನೀರು ನಿಂತು ಸಾಂಕ್ರಾಮಿಕ ರೋಗ ಹರಡುವ ಸಂಭವ ಇದ್ದು, ಅಲ್ಲಿನ ಜನರು ರೋಗಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ತಗ್ಗು ಪ್ರದೇಶವನ್ನು ಯಾವಾಗ ಮುಚ್ಚಲಾಗುವುದು ಮತ್ತು ಯಾವುದೇ ರೋಗವನ್ನು ಹರಡದಂತೆ | • ಪುರಸಭೆ ವ್ಯಾಪ್ತಿಯಲ್ಲಿ ನಿಯಮಿತವಾಗಿ ಚರಂಡಿ ಸ್ವಚ್ಚತೆ, ಬ್ಲೀಚಿಂಗ್ ಪೌಡರ್ ಸಿಂಪಡಣೆ, ಫಾಗಿಂಗ್ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಮಳೆಗಾಲದಲ್ಲಿ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಸದರಿ ಪ್ರದೇಶದಲ್ಲಿ ಲಾರ್ವಾ ಸರ್ವೇ (Survey) ಕೈಗೊಂಡು ನಿಗದಿತ ಅವಧಿಯಲ್ಲಿ ರಸಾಯನಿಕಗಳನ್ನು ಸಿಂಪಡಿಸಿ ಯಾವುದೇ ರೋಗ-ರುಜಿನಗಳು ಹರಡದಂತೆ ಕ್ರಮ ವಹಿಸಲಾಗುತ್ತಿದೆ.<br><br>• ಹಳೆ ಬಸ್ ನಿಲ್ದಾಣದ ಕಟ್ಟಡ ನಿರ್ಮಾಣ ಮತ್ತು ಕೆಡಹುವಿಕೆ ತ್ಯಾಜ್ಯವನ್ನು ಸದರಿ ತಗ್ಗು ಪ್ರದೇಶದಲ್ಲಿ ಭರ್ತಿ ಮಾಡಲು ಕ್ರಮ ವಹಿಸಲಾಗಿದೆ. |

| | | |
|---|---|---|
| | ಸರ್ಕಾರ ತೆಗೆದುಕೊಂಡ ಕ್ರಮವೇನು; (ಸ್ವಚ್ಛತಾ ಕಾರ್ಯ ಎಷ್ಟು ದಿನಗಳಲ್ಲಿ ಪೂರ್ಣಗೊಳ್ಳಲಾಗುವುದು ಖಚಿತವಾಗಿ ಮಾಹಿತಿ ಒದಗಿಸುವುದು); | |
| ಇ) | ನಗರದಲ್ಲಿರುವ ಡ್ರೈನೇಜ್‌ಗಳು ಸ್ವಚ್ಛತೆ ಇಲ್ಲದೇ ಕೊಳಚೆ ನೀರು ರಸ್ತೆಗೆ ಹರಿದು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸದರಿ ಕಾರ್ಯ ಯಾವಾಗ ಪೂರ್ಣಗೊಳಿಸಲಾಗುವುದು; (ಸ್ವಚ್ಛತಾ ಕಾರ್ಯ ಎಷ್ಟು ದಿನಗಳಲ್ಲಿ ಪೂರ್ಣಗೊಳ್ಳಲಾಗುವುದು; ಮಾಹಿತಿ ಒದಗಿಸುವುದು) | • ಆಳಂದ ಪುರಸಭೆ ವ್ಯಾಪ್ತಿಯಲ್ಲಿರುವ ರಾಜ ಕಾಲುವೆಗಳನ್ನು ಪ್ರತಿ 6 ತಿಂಗಳಿಗೊಮ್ಮೆ ಸ್ವಚ್ಛಗೊಳಿಸಲಾಗುತ್ತಿದೆ ಹಾಗೂ ಇತರೆ ಚರಂಡಿಗಳನ್ನು ಕಾಲಕಾಲಕ್ಕೆ ಪೌರಕಾರ್ಮಿಕರಿಂದ ವಾರ್ಡುವಾರು ಸ್ವಚ್ಛ ಮಾಡಿಸಲಾಗುತ್ತಿದೆ. ಚರಂಡಿಗಳಿಂದ ಸಂಗ್ರಹಿಸಲಾದ silt ಅನ್ನು, ಒಣಗಿದ ನಂತರ SWM Site ನ ನಿಗದಿತ ಜಾಗಕ್ಕೆ / ಸ್ಯಾನಿಟರಿ ಲ್ಯಾಂಡ್‌ಫಿಲ್ ಜಾಗಕ್ಕೆ ವಿಲೇವಾರಿ ಮಾಡಲಾಗುತ್ತಿದೆ.<br>• ಸಾರ್ವಜನಿಕರಿಂದ ಸ್ವೀಕೃತವಾಗುವ ದೂರುಗಳನ್ನು ನಿಗದಿತ ಅವಧಿಯಲ್ಲಿ ವಿಲೆ ಮಾಡಲು ಕ್ರಮ ವಹಿಸಲಾಗುತ್ತಿದೆ. |
| ಈ) | ಸದರಿ ನಗರದಲ್ಲಿ ಮಲ ಮತ್ತು ಮೂತ್ರ ವಿಸರ್ಜನೆ ಮಾಡಲು ಶೌಚಾಲಯಗಳು ಇಲ್ಲದೇ ಜನರು ಬಯಲು ಪ್ರದೇಶಗಳಿಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಹೊಸದಾಗಿ ಶೌಚಾಲಯಗಳನ್ನು ಯಾವಾಗ ನಿರ್ಮಿಸಲಾಗುವುದು? (ದಿನಾಂಕವಾರು ಮಾಹಿತಿಯನ್ನು ಒದಗಿಸುವುದು) | • ಎಸ್.ಬಿ.ಎಂ (ನಗರ) - 2.0 ಯೋಜನೆ ಅಡಿಯಲ್ಲಿ 02 ಸಂಖ್ಯೆ ಸಾರ್ವಜನಿಕ ಶೌಚಾಲಯ, 02 ಸಂಖ್ಯೆ ಸಮುದಾಯ ಶೌಚಾಲಯ, 01 ಸಂಖ್ಯೆ ಸಾರ್ವಜನಿಕ ಮೂತ್ರಾಲಯಗಳ ಕಾಮಗಾರಿಗಳನ್ನು ಪೂರ್ಣಗೂಳಿಸಿ ನವೆಂಬರ್-2025ರ ಮಾಹೆಯಲ್ಲಿ ಸಾರ್ವಜನಿಕರ ಬಳಕೆಗಾಗಿ ಒದಗಿಸಲಾಗಿರುತ್ತದೆ.<br>• ಮುಂದುವರೆದು, ಎಸ್.ಬಿ.ಎಂ (ನಗರ) - 2.0 ಯೋಜನೆಯಡಿಯಲ್ಲಿ 127 ವೈಯಕ್ತಿಕ ಶೌಚಾಲಯಗಳ ಕಾಮಗಾರಿ ನಿರ್ಮಾಣ ಹಂತದಲ್ಲಿದ್ದು, ಆದಷ್ಟು ಶೀಘ್ರವಾಗಿ ಸಾರ್ವಜನಿಕರ ಬಳಕೆಗಾಗಿ ಒದಗಿಸಲು ಕ್ರಮ ವಹಿಸಲಾಗುತ್ತಿದೆ.<br>• ಸ್ವಚ್ಛ ಭಾರತ ಮಿಷನ್ (ನ)-2.0 ಯೋಜನೆಯ ಐ.ಇ.ಸಿ ಘಟಕದಡಿಯಲ್ಲಿ ಪುರಸಭೆ ವ್ಯಾಪ್ತಿಯಲ್ಲಿ 05 ಜನ Community Mobilizers ರನ್ನು ನೇಮಕ ಮಾಡಲಾಗಿದ್ದು, ಅವರ ಮೂಲಕ ಹಾಗೂ ಸಾರ್ವಜನಿಕ ಪ್ರಕಟಣೆ ಮೂಲಕ ಮನೆ-ಮನೆಗಳಲ್ಲಿ ಬಯಲು ಮಲ ಮತ್ತು ಮೂತ್ರ ವಿಸರ್ಜನೆ ಕುರಿತಂತೆ ಅರಿವು ಮೂಡಿಸಲಾಗುತ್ತಿದೆ. |

(ಕಡತ ಸಂಖ್ಯೆ: ನಅಇ 284 ಸಿಎಸ್‌ಎಸ್ 2025)

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು